ಆ) ಬಂದಿದ್ದರೆ, ಆಹಾರ ಧಾನ್ಯಗಳನ್ನು ಗ್ರಾಮ ಹಾಗೂ ತಾಂಡಗಳಿಗೆ ಹೋಗಿ ವಿತರಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು (ವಿವರ ನೀಡುವುದು)?

ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು)

ಅ) ಹೌದು,

ಆ) ಕರ್ನಾಟಕ ಅಗತ್ಯ ವಸ್ತುಗಳ (ಸಾ.ವಿ.ಪ) ನಿಯಂತ್ರಣ ತಿದ್ದುಪಡಿ ಆದೇಶ 2014ರನ್ವಯ ಹೊಸ ನ್ಯಾಯಬೆಲೆ ಅಂಗಡಿ ಮಂಜೂರಾತಿಗಾಗಿ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ 500 ಪಡಿತರ ಚೀಟಿಗಳು ಹಾಗೂ ಗ್ರಾಮೀಣ ಪ್ರದೇಶದಲ್ಲಿ 300 ಪಡಿತರ ಚೀಟಿಗಳು ಅವಶ್ಯಕವಿದ್ದು, ವಿಶೇಷ ಸಂದರ್ಭಗಳಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ 200 ಪಡಿತರ ಚೀಟಿಗಳಿದ್ದಲ್ಲಿ ಹೊಸ ನ್ಯಾಯಬೆಲೆ ಅಂಗಡಿ ಪ್ರಾಧಿಕಾರ ಮಂಜೂರು ಮಾಡಲು ಅವಕಾಶವಿರುತ್ತದೆ. ಸ್ಥಳೀಯ ಪರಿಸ್ಥಿತಿಗೆ ಅನುಗುಣವಾಗಿ ಜಿಲ್ಲಾಧಿಕಾರಿಗಳು ಕಡಿಮೆ ಪಡಿತರ ಚೀಟಿ ಇರುವ ಕಡೆ ನ್ಯಾಯಬೆಲೆ ಅಂಗಡಿ ತೆರೆಯಲು ಕ್ರಮವಹಿಸಿರುತ್ತಾರೆ.

ವಸತಿ ನಿಲಯಗಳ ಕಟ್ಟಡ ಕಾಮಗಾರಿಗಳು

1587(1249); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಯಲ್ಲಿ ಬಾಲಕ ಮತ್ತು ಬಾಲಕಿ ಹಾಗೂ ವೃತ್ತಿಪರ ವಿಷಯಗಳಲ್ಲಿ ಅಭ್ಯಾಸ ಮಾಡುವ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗಾಗಿ ಇಲಾಖಾ ವತಿಯಿಂದ ಇರುವ ವಸತಿ ನಿಲಯಗಳಿಗೆ ಹೊಸ ಕಟ್ಟಡ ನಿರ್ಮಾಣದ ಕಾಮಗಾರಿ ಜರುಗುತ್ತಿದೆಯೇ (ವಿವರ ನೀಡುವುದು);

ಆ) ಈ ಕಟ್ಟಡದ ಕಾಮಗಾರಿಗಳಿಗೆ ಎಷ್ಟು ಅನುದಾನ ಮಂಜೂರಾಗಿದೆ; ಯಾವ ಯಾವ ಹಂತದಲ್ಲಿದೆ; ವಿವರ ನೀಡುವುದು;

ಇ) ಅನೇಕ ಕಡೆ ಕಟ್ಟಡ ಕಾಮಗಾರಿಗಳು ನಿಧಾನಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದರೆ, ಈ ಕಾಮಗಾರಿಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ಸರ್ಕಾರ ಯಾವ ಕ್ರಮ ತೆಗೆದುಕೊಳ್ಳುವುದು?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಬಟಗೇರಾ ಗ್ರಾಮದಲ್ಲಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ.

ಆ) ಸದರಿ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಜಿಲ್ಲಾ ಪಂಚಾಯತ್‌ನ ಸಂಬಂಧಪಟ್ಟ ಆಯವ್ಯಯ ಲೆಕ್ಕ ಶೀರ್ಷಿಕೆಯಡಿ ಲಭ್ಯವಿರುವ ಅನುದಾನದಲ್ಲಿ ರೂ. 88.51 ಲಕ್ಷಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲಾಗುತ್ತಿದ್ದು, ಇದುವರೆವಿಗೆ ರೂ. 20.00 ಲಕ್ಷಗಳನ್ನು ಜಿಲ್ಲಾ ಪಂಚಾಯತ್, ಬೀದರ್ ವತಿಯಿಂದ ಮಂಜೂರು ಮಾಡಲಾಗಿರುತ್ತದೆ. ಪ್ರಸ್ತುತ, ಸದರಿ ಕಟ್ಟಡವು ಬೇಸ್ಮೆಂಟ್ ಹಂತದಲ್ಲಿ ಪ್ರಗತಿಯಲ್ಲಿರುತ್ತದೆ.

ಇ) ಹೌದು

ಈ) ನಿಗಧಿತ ಕಾಲಮಿತಿಯೊಳಗಾಗಿ ಸದರಿ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಿ ಇಲಾಖೆಯ ವಶಕ್ಕೆ ಪಡೆಯಲು ಕ್ರಮವಹಿಸಲಾಗುವುದು.